# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 25-03-2021 ಪ್ರಶ್ನೆ ಸಂಖ್ಯೆ : 1857 (2151)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರ ನೀಡಬೇಕಾದ ದಿನಾಂಕ : 25-03-2021

ಉತ್ತರಿಸುವ ಸಚಿವರು: ಗೃಹ ಮತ್ತು ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಶಾಸನ ರಚನೆ ಸಚಿವರು

ವಿಷಯ : ಸರ್ಕಾರಿ ಸಂಚಾರ ನಿಯಮಗಳಿಂದ ವಿನಾಯತಿ ಕುರಿತು

(ಅ) ಬೆಂಗಳೂರು ನಗರದಲ್ಲಿ ಕೆಲವೊಂದು ಹಬ್ಬದ ದಿನಗಳಂದು ಮತ್ತು ಶುಕ್ರವಾರದಂದು ಸಂಚಾರಿ ನಿಯಮಗಳಿಂದ ವಿನಾಯತಿ ನೀಡುವ ಬಗ್ಗೆ ಆದೇಶವಾಗಿದೆಯೇ;

(ಆ) ಬೆಂಗಳೂರು ನಗರದಲ್ಲಿ ಒಂದು ಧರ್ಮದ ಹಬ್ಬದ ದಿನದಂದು ಆ ಧರ್ಮದ ಯುವಕರು ದ್ವಿಚಕ್ರವಾಹನದಲ್ಲಿ ಇಬ್ಬರಿಗಿಂತ ಹೆಚ್ಚಿನ ಜನರು ಪ್ರಯಾಣಿಸುತ್ತಿರುವುದು, ಇತರ ಧರ್ಮದ ಪ್ರಾರ್ಥನಾ ಸ್ಥಳದ ಬಳಿ ದೊಡ್ಡ ಧ್ವನಿಯಲ್ಲಿ ಕರ್ಕಶವಾದ ಹಾರ್ನ್ ಬಳಸುವುದು ಸರಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲಿ,ೆಲ ಇಂತಹವರ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ;

(ಇ) ಬೆಂಗಳೂರು ನಗರದಲ್ಲಿ ಕಳೆದ 2 ತಿಂಗಳ ಅವಧಿಯಲ್ಲಿ ಶುಕ್ರವಾರದಂದು ಸಂಚಾರ ನಿಯಮ ಉಲ್ಲಂಘಿಸಿದ ಎಷ್ಟು ಪ್ರಕರಣಗಳನ್ನು ದಾಖಲಿಸಲಾಗಿದೆ; ಅದರಲ್ಲಿ ಇಬ್ಬರಿಗಿಂತ ಹೆಚ್ಚಿನ ಪ್ರಯಾಣಿಕರು ದ್ವಿಚಕ್ರ ವಾಹನದಲ್ಲಿ ಪ್ರಯಾಣಿಸಿ ನಿಯಮ ಉಲ್ಲಂಘಿಸಿರುವ ಪ್ರಕರಣಗಳು ಎಷ್ಟು; ವಿರುದ್ಧ ದಿಕ್ಕಿನಿಂದ ಪ್ರಯಾಣಿಸಿ ನಿಯಮ ಉಲ್ಲಂಘಿಸಿರುವ ಪ್ರಕರಣಗಳು ಎಷ್ಟು?